ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

ಸಿ.ಸಿ.338/2025

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಸುಲೇಮಾನ್ ಖಾನ್ | ಪಿ.ಡಬ್ಯೂ.2 |
| ತಂದೆಯ ಹೆಸರು | : | ಜಫ್ರುಲ್ಲಾಖಾನ್ | ಸಿ.ಡಬ್ಯೂ.2 |
| ವಯಸ್ಸು | : | 48 ವರ್ಷ | |
| ವೃತ್ತಿ | : | ಚಾಲಕ | |
| ವಾಸ | : | ಸಂತೆ ಮಾರ್ಕೆಟ್, ಚಿಕ್ಕಮಗಳೂರು | |

ದಿನಾಂಕಃ 21-04-2026 ರಂದು ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-

ಆರೋಪಿಯ ಪರಿಚಯವಿಲ್ಲ. ಚಾಸಾ-3 ರವರ ಪರಿಚಯವಿಲ್ಲ. ನೋಟೀಸ್ ಅನ್ನು ಹಾಗೂ ಮಹಜರ್ ಅನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಮತ್ತು 3 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-1(ಬಿ) ಹಾಗೂ ನಿಪಿ-3(ಬಿ) ಇರುತ್ತದೆ. ಸದರಿ ಸಹಿಯನ್ನು ಒಂದೂವರೆ ವರ್ಷದ ಹಿಂದೆ ಠಾಣೆಯಲ್ಲಿ ಹಾಕಿರುತ್ತೇನೆ. ಯಾವ ವಿಚಾರಕ್ಕೆ ಸದರಿ ಸಹಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಸ್ಥಳದಲ್ಲಿ ಬೇರೆ ಏನೂ ಇರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ04.12.2024 ರಂದು ಘಟನಾ ಸ್ಥಳದಲ್ಲಿ ಪೊಲೀಸರು ನಿಪಿ-3 ರಂತೆ ಮಧ್ಯಾಹ್ನಃ04.35 ರಿಂದ 05.35 ರವರೆಗೆ ಮಹಜರ್ ತಯಾರಿಸಿ ಮುದ್ದೆ ಮಾಲುಗಳನ್ನು ಅಮಾನತ್ತುಪಡಿಸಿಕೊಂಡಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಾನು ನಿಪಿ-3(ಬಿ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-4 ರಂತೆ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ05.12.2024 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ 'ದಿಃ04.12.2024 ರಂದು 15.40 ಗಂಟೆ ಸಮಯದಲ್ಲಿ ..... ಪುನಃ ನೋಡಿದರೆ ಗುರುತಿಸುತ್ತೇನೆ' ಎಂದು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಷಯಗಳು ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡಬೇಕೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

C.C.No.338/2025
PW-2 CW-2

ಎಸ್‌ಆರ್‌ಃ